**National**
**Kannada**
**30.05.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

**೧. ’ಖೇತ್ ಬಚಾವೋ’ ಅಭಿಯಾನವನ್ನು ಸಮಗ್ರ ರಾಷ್ಟ್ರೀಯ ಅಭಿಯಾನವನ್ನಾಗಿ ರೂಪಿಸಲು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ**

**೨. ಆಧುನಿಕ ತಂತ್ರಜ್ಞಾನಗಳಲ್ಲಿ, ಲಿಥಿಯಂ ಬ್ಯಾಟರಿ, ಶಾಶ್ವತ ಅಯಸ್ಕಾಂತಿಯ ಖನಿಜಗಳ ಪಾತ್ರ ನಿರ್ಣಾಯಕ: ಸಚಿವ ಅಶ್ವಿನಿ ವೈಷ್ಣವ್**

**೩. ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**೪. ಸಿಂಗಾಪುರ ಓಪನ್ ಬ್ಯಾಡ್ಮಿಂಟನ್; ಭಾರತದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ - ಚಿರಾಗ್ ಶೆಟ್ಟಿ ಜೋಡಿ ಫೈನಲ್ ಪ್ರವೇಶ**

**೫. ಅಂತಾರಾಷ್ಟ್ರೀಯ ಮಹಿಳಾ ಟಿ-೨೦ ಕ್ರಿಕೆಟ್; ಭಾರತದ ವಿರುದ್ಧ ಟಾಸ್ ಗೆದ್ದ ಇಂಗ್ಲೆಂಡ್ ಬ್ಯಾಟಿಂಗ್ ಆಯ್ಕೆ**

**<>><><*><><<>**

**ಖೇತ್ ಬಚಾವೋ ಅಭಿಯಾನವನ್ನು ಕೃಷಿಭೂಮಿ, ರೈತರು ಮತ್ತು ಗ್ರಾಮಗಳನ್ನು ಸಂಪರ್ಕಿಸುವ ಸಮಗ್ರ ರಾಷ್ಟ್ರೀಯ ಅಭಿಯಾನವನ್ನಾಗಿ ರೂಪಿಸಬೇಕು ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಖೇತ್ ಬಚಾವೋ ಅಭಿಯಾನದ ಸಿದ್ಧತೆಗಳ ಕುರಿತು ಉನ್ನತ ಮಟ್ಟದ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಸಭೆಯಲ್ಲಿ, ರಸಗೊಬ್ಬರಗಳ ಸಮತೋಲಿತ ಮತ್ತು ವಿವೇಚನಾಯುಕ್ತ ಬಳಕೆ, ಹವಾಮಾನ ಸಂಬಂಧಿತ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ರೈತರಿಗೆ ಸಕಾಲಿಕ ಸಲಹೆ, ಪಂಚಾಯತ್ ಮಟ್ಟದಲ್ಲಿ ಸಕ್ರಿಯ ಭಾಗವಹಿಸುವಿಕೆ ಮತ್ತು ಯೋಜನೆಗಳನ್ನು ನೇರವಾಗಿ ಹಳ್ಳಿಗಳಿಗೆ ತಲುಪಿಸುವುದು ಈ ಅಭಿಯಾನದ ಗುರಿಯಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.**

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಒಂದು ದಿನದ ಭೇಟಿಗಾಗಿ ಕೇರಳಕ್ಕೆ ನಾಳೆ ಆಗಮಿಸಲಿದ್ದಾರೆ. ಕೊಟ್ಟಾಯಂನಲ್ಲಿ ಮಲಯಾಳಂ ದಿನಪತ್ರಿಕೆ ದೀಪಿಕಾದ ೧೪೦ನೇ ಸಂಸ್ಥಾಪನಾ ವಾರ್ಷಿಕೋತ್ಸವನ್ನು ಅವರು ಉದ್ಘಾಟಿಸಲಿದ್ದಾರೆ. ರಾಜ್ಯ ಸಂಸದ ಸಿ.ಸದಾನಂದನ್ ಮಾಸ್ಟರ್ ಕಣ್ಣೂರಿನಲ್ಲಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿಗಳು ಭಾಗವಹಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ.

<>><><*><><<>

ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಹ್ಲೈಂಗ್ ಐದು ದಿನಗಳ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಿದರು. ಇಂದು ಮ್ಯಾನ್ಮಾರ್ ಅಧ್ಯಕ್ಷರು ಬಿಹಾರದ ಗಯಾಗೆ ಭೇಟಿ ನೀಡಿ ಮಹಾಬೋಧಿ ದೇವಾಲಯದಲ್ಲಿ ಪ್ರಾರ್ಥನೆ ಸಲ್ಲಿಸಿದರು. ಅವರೊಂದಿಗೆ ಹಲವಾರು ಸಚಿವರು ಮತ್ತು ಹಿರಿಯ ಅಧಿಕಾರಿಗಳನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗವಿದೆ. ಅಧ್ಯಕ್ಷ ಯು ಮಿನ್ ಆಂಗ್ ಹ್ಲೈಂಗ್, ತಮ್ಮ ಪ್ರಸ್ತುತ ಅಧಿಕಾರಾವಧಿಯಲ್ಲಿ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಉಭಯ ದೇಶಗಳ ನಡುವಿನ ಐತಿಹಾಸಿಕ ಮತ್ತು ನಾಗರಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಅವರು, ಸೋಮವಾರ ಪ್ರಧಾನಿ ನರೇಂದ್ರ ಮೋದಿಯವರೊಂದಿಗೆ ಚರ್ಚೆ ನಡೆಸಲಿದ್ದಾರೆ.

<>><><*><><<>

ಲಿಥಿಯಂ ಬ್ಯಾಟರಿಗಳು ಮತ್ತು ಶಾಶ್ವತ ಅಯಸ್ಕಾಂತಿಯ ಖನಿಜಗಳು ಹಲವಾರು ಆಧುನಿಕ ತಂತ್ರಜ್ಞಾನಗಳಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಇಂದು ಅವರು, ಗ್ರೇಟರ್ ನೋಯ್ಡಾದ ಸೂರಜ್‌ಪುರದಲ್ಲಿರುವ ಲೋಹಮ್‌ಗೆ ಭೇಟಿ ನೀಡಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಆಶಯದಂತೆ ಇಂತಹ ತಂತ್ರಜ್ಞಾನಗಳನ್ನು ದೇಶೀಯವಾಗಿ ಉತ್ಪಾದಿಸಿ, ಅಭಿವೃದ್ಧಿಪಡಿಸಬೇಕು. ಈ ದೃಷ್ಟಿಕೋನಕ್ಕೆ ಅನುಗುಣವಾಗಿ ಲೋಹಮ್ ಎಂಬ ಯುವ ನವೋದ್ಯಮವು, ಸಂಕೀರ್ಣ ತಂತ್ರಜ್ಞಾನವನ್ನು ಯಶಸ್ವಿಯಾಗಿ ಅಭಿವೃದ್ಧಿಪಡಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಶ್ಲಾಘಿಸಿದರು.

<>><><*><><<>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<>><><*><><<>

ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ಪಿಎಂ ಸೇತು ಯೋಜನೆಯಡಿಯಲ್ಲಿ ಐಟಿಐ ಕ್ಲಸ್ಟರ್‌ಗಾಗಿ ಆರ್ಸೆಲರ್ ಮಿತ್ತಲ್ ನಿಪ್ಪಾನ್‌ಸ್ಟೀಲ್ ಇಂಡಿಯಾ ಎಂಬ ಖಾಸಗಿ ಕಂಪನಿ ಸಲ್ಲಿಸಿದ್ದ ಕಾರ್ಯತಂತ್ರದ ಹೂಡಿಕೆ ಯೋಜನೆ-ಎಸ್‌ಐಪಿಗೆ ರಾಷ್ಟ್ರೀಯ ಚಾಲನಾ ಸಮಿತಿ ಅನುಮೋದನೆ ನೀಡಿದೆ. ಪ್ರಧಾನಮಂತ್ರಿ ಕೌಶಲ್ಯ ಮತ್ತು ಉದ್ಯೋಗಾವಕಾಶ ಪರಿವರ್ತನೆ ಮೂಲಕ ಅಪ್‌ಗ್ರೇಡ್ ಮಾಡಿದ ಐಟಿಐ ಯೋಜನೆ ಪಿಎಂ ಸೇತು ಅಡಿಯಲ್ಲಿ ಅನುಮೋದನೆ ಪಡೆದ ಮೊದಲ ಎಸ್‌ಐಪಿ ಇದಾಗಿದೆ. ಇದು ಆಂಧ್ರಪದೇಶವನ್ನು ಈ ಯೋಜನೆಯಡಿಯಲ್ಲಿ ಕೈಗಾರಿಕೆ ಪಾಲುದಾರಿಕೆಯನ್ನು ಕಾರ್ಯಗತಗೊಳಿಸುವ ಮೊದಲ ರಾಜ್ಯವಾಗಿಸುತ್ತದೆ.

<>><><*><><<>

ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಆಯ್ಕೆಯಾಗಿದ್ದಾರೆ. ಇಂದು ಸಂಜೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅವರನ್ನು ಆಯ್ಕೆ ಮಾಡಲಾಗಿದೆ. ಬಳಿಕ ಡಿ.ಕೆ. ಶಿವಕುಮಾರ್ ಅವರ ಹೆಸರನ್ನು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಅಧಿಕೃತವಾಗಿ ಘೋಷಿಸಲಾಯಿತು. ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭ ಜೂನ್ ೩ರಂದು ಲೋಕಭವನದ ಗಾಜಿನ ಮನೆಯಲ್ಲಿ ನಡೆಯಲಿದೆ. ಈ ಕಾರ್ಯಕ್ರಮವನ್ನು ಸಾರ್ವಜನಿಕರಿಗೆ ಯಾವುದೇ ತೊಂದರೆ

ಉಂಟಾಗದಂತೆ ಸರಳವಾಗಿ ಆಚರಿಸಲು ಕಾಂಗ್ರೆಸ್ ಪಕ್ಷ ನಿರ್ಧರಿಸಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ತಿಳಿಸಿದ್ದಾರೆ.

<>><><*><><<>

ಸಿಂಗಾಪುರ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಡಬಲ್ಸ್‌ನಲ್ಲಿ ಭಾರತದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಇಂದು ಫೈನಲ್ ಪ್ರವೇಶಿಸಿದೆ. ಸೆಮಿಫೈನಲ್ ಪಂದ್ಯದಲ್ಲಿ ವಿಶ್ವದ ಅಗ್ರ ಶ್ರೇಯಾಂಕಿತ ಜೋಡಿ, ದಕ್ಷಿಣ ಕೊರಿಯಾದ ಸಿಯೊ ಸೆಯುಂಗ್-ಜೇ ಮತ್ತು ಕಿಮ್ ವೊನ್-ಹೊ ಅವರನ್ನು ೨೧-೧೯, ೨೧-೧೮ ಸೆಟ್‌ಗಳಿಂದ ಸೋಲಿಸಿತು. ಪುರುಷರ ಡಬಲ್ಸ್‌ನ ಮತ್ತೊಂದು ಸೆಮಿಫೈನಲ್ ಪಂದ್ಯದಲ್ಲಿ, ಇಂಡೋನೇಷ್ಯಾದ ಮುಹಮ್ಮದ್ ಶೋಹಿಬುಲ್ ಫಿಕ್ರಿ ಮತ್ತು ಫಜರ್ ಅಲ್ಫಿಯಾನ್ ಜೋಡಿ, ಚೀನಾದ ಜೋಡಿ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್ ಚಾಂಗ್ ಅವರನ್ನು ಪರಾಭವಗೊಳಿಸಿದೆ. ಈ ಜೋಡಿ, ಪಂದ್ಯಾವಳಿಯ ಫೈನಲ್‌ನಲ್ಲಿ ಭಾರತದ ಜೋಡಿ ಸಾತ್ವಿಕ್‌ಸಾಯಿರಾಜ್ ಮತ್ತು ಚಿರಾಗ್ ಅವರನ್ನು ಎದುರಿಸಲಿದೆ. ಭಾರತದ ಮಿಶ್ರ ಡಬಲ್ಸ್ ಜೋಡಿ ಧ್ರುವ್ ಕಪಿಲಾ ಮತ್ತು ತನಿಶಾ ಕ್ರಾಸ್ಟೊ ಸೆಮಿಫೈನಲ್ ಪಂದ್ಯದಲ್ಲಿ ಜಪಾನ್‌ನ ಸಯಾಕಾ ಹೋಬರಾ ಮತ್ತು ಯುಯಿಚಿ ಶಿವಮೊಗ್ಗಾಮಿ ವಿರುದ್ಧ ೧೪-೨೧, ೨೧-೧೭, ೧೩-೨೧ ಸೆಟ್‌ಗಳಿಂದ ಸೋತರು.

<>><><*><><<>

ನಿರ್ಗಮಿತ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರಿಗೆ ದೆಹಲಿಯಲ್ಲಿಂದು ವಿಧ್ಯುಕ್ತ ಗೌರವ ವಂದನೆಯೊಂದಿಗೆ ಬೀಳ್ಕೊಡುಗೆ ನೀಡಲಾಯಿತು. ೧೯೮೧ ರಲ್ಲಿ ಭಾರತೀಯ ಸೇನೆಗೆ ನೇಮಕಗೊಂಡ ಅವರು, ನಾಲ್ಕು ದಶಕಗಳ ಕಾಲ ಸುಧೀರ್ಘ ಸೇವೆ ಸಲ್ಲಿಸಿದ್ದಾರೆ. ಅವರ ಅಪ್ರತಿಮ ಸೇವೆಗಾಗಿ ಪರಮ ವಿಶಿಷ್ಟ ಸೇವಾ ಪದಕ, ಉತ್ತಮ ಯುದ್ಧ ಸೇವಾ ಪದಕ, ಅತಿ ವಿಶಿಷ್ಟ ಸೇವಾ ಪದಕ, ವಿಶಿಷ್ಟ ಪದಕ ಮತ್ತು ಸೇನಾ ಪದಕಗಳನ್ನು ನೀಡಲಾಗಿದೆ. ನಿರ್ಗಮಿತ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರ ಸ್ಥಾನವನ್ನು ಲೆಫ್ಟಿನೆಂಟ್ ಜನರಲ್ ಎಸ್.ಎಸ್.ರಾಜಾ ಸುಬ್ರಮಣಿ ಅವರು ವಹಿಸಿಕೊಳ್ಳಲಿದ್ದಾರೆ.

<>><><*><><<>

ಯುಪಿಎಸ್‌ಸಿ ನಾಗರಿಕ ಸೇವೆಗಳ ಪರೀಕ್ಷೆ ೨೦೨೩ ರ ಫಲಿತಾಂಶಗಳಿಗೆ ಸಂಬಂಧಿಸಿದಂತೆ ದಾರಿತಪ್ಪಿಸುವ ಜಾಹೀರಾತುಗಳಿಗಾಗಿ ಖಾಸಗಿ ತರಬೇತಿ ಕೇಂದ್ರವೊಂದಕ್ಕೆ ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ ೭ ಲಕ್ಷ ದಂಡ ವಿಧಿಸಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ.  ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಸಚಿವರು, ಗ್ರಾಹಕ ರಕ್ಷಣಾ ಕಾಯ್ದೆ, ೨೦೧೯ ರ ಅಡಿಯಲ್ಲಿ ಪ್ರಾಧಿಕಾರವು ಅಂತಿಮ ಆದೇಶವನ್ನು ಅಂಗೀಕರಿಸಿದೆ ಎಂದು ಮಾಹಿತಿ ನೀಡಿದ್ದಾರೆ. ಪ್ರಾಧಿಕಾರವು, ಇದುವರೆಗೆ ಹಲವು ತರಬೇತಿ ಸಂಸ್ಥೆಗಳಿಗೆ ೬೦ ಕ್ಕೂ ಹೆಚ್ಚು ನೋಟಿಸ್‌ಗಳನ್ನು ನೀಡಿದ್ದು, ೧.೪೬ ಕೋಟಿ ರೂಪಾಯಿಗಿಂತ ಹೆಚ್ಚಿನ ದಂಡವನ್ನು ವಿಧಿಸಿದೆ. ವಿದ್ಯಾರ್ಥಿಗಳ ಹಿತಾಸಕ್ತಿಗಳನ್ನು ಕಾಪಾಡುವುದನ್ನು ಮತ್ತು ಮಾಹಿತಿಯುಕ್ತ ನಿರ್ಧಾರ ತೆಗೆದುಕೊಳ್ಳುವಿಕೆಯನ್ನು ಉತ್ತೇಜಿಸುವುದನ್ನು ಪ್ರಾಧಿಕಾರ ಮುಂದುವರೆಸಿದೆ ಎಂದು ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ.

<>><><*><><<>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ ತನ್ನ ತಂತ್ರಜ್ಞಾನ ಪಾಲುದಾರ ಟಿಸಿಎಸ್‌ನ ತಾಂತ್ರಿಕ ದೋಷದಿಂದಾಗಿ ಕೆಲವು ಪರೀಕ್ಷಾ ಕೇಂದ್ರಗಳಲ್ಲಿ ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ ಸಿಯುಇಟಿ ೨೦೨೫ ರ ಆರಂಭ ವಿಳಂಬವಾಗಿದೆ ಎಂದು ತಿಳಿಸಿದೆ. ಈ ಸಮಸ್ಯೆಯನ್ನು ಪರಿಹರಿಸಲಾಗಿದ್ದು, ಯಾವುದೇ ಅಭ್ಯರ್ಥಿಗೆ ಅನಾನುಕೂಲವಾಗದಂತೆ ನೋಡಿಕೊಳ್ಳಲು ಸಂಪೂರ್ಣ ಕಾಲಾವಕಾಶದೊಂದಿಗೆ ಪರೀಕ್ಷೆಯನ್ನು ನಡೆಸಲಾಗಿದೆ ಎಂದು ಎನ್‌ಟಿಎ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ಮಧ್ಯಾಹ್ನದ ಅವಧಿಯ ಸಮಯವನ್ನು ಪರಿಷ್ಕರಿಸಲಾಗಿದ್ದು, ಮಧ್ಯಾಹ್ನ ೨.೩೦ ಕ್ಕೆ ಅಭ್ಯರ್ಥಿಗಳಿಗೆ ಪ್ರವೇಶ ಅನುಮತಿಗೊಳಿಸಲಾಗಿದೆ. ಪರೀಕ್ಷೆಯು ನಿಗದಿತ ಮಧ್ಯಾಹ್ನ ೩ ಗಂಟೆಯ ಬದಲು ಸಂಜೆ ೪ ಗಂಟೆಗೆ ಆರಂಭವಾಗಿದೆ. ಇದರಿಂದ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಉಂಟಾದ ಅನಾನುಕೂಲತೆಗೆ ಸಂಸ್ಥೆ ವಿಷಾದ ವ್ಯಕ್ತಪಡಿಸಿದೆ.

<>><><*><><<>

ಸಿಂಗಾಪುರದಲ್ಲಿ ನಡೆಯುತ್ತಿರುವ ಇಂಟರ್‌ನ್ಯಾಷನಲ್ ಇನ್ಸ್‌ಟಿಟ್ಯೂಟ್ ಫಾರ್ ಸ್ಟ್ರಾಟರ್ಜಿಕ್ ಸ್ಟಡೀಸ್ ಸಂವಾದದ ಸಂದರ್ಭದಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರು, ನೆದರ್‌ಲ್ಯಾಂಡ್ಸ್ ರಕ್ಷಣಾ ಸಚಿವ ದಿಲನ್ ಯೆಘೇರಿಯಸ್ ಅವರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸಿದರು.

<>><><*><><<>

ಬ್ರಿಸ್ಟಲ್‌ನಲ್ಲಿಂದು ನಡೆಯುತ್ತಿರುವ ಅಂತಾರಾಷ್ಟ್ರೀಯ ಮಹಿಳಾ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಇಂಗ್ಲೆಂಡ್ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿಯಂತೆ ೧೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೭೧ ರನ್ ಮಾಡಿ ಆಡುತ್ತಿದೆ. ಭಾರತ ಪ್ರಸ್ತುತ ಸರಣಿಯಲ್ಲಿ ೧-೦ ಅಂತರದ ಮುನ್ನಡೆಯಲ್ಲಿದೆ.

**<>><><*><><<>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟನ್ಸ್ ಮುಖಾಮುಖಿಯಾಗಲಿವೆ. ಪಂದ್ಯ ನಾಳೆ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>